ವಿದ್ಯುತ್ ಕಡಿತ

5298 (5901); ಶ್ರೀ ಅಶೋಕ ಆರ್. (ಪದ್ಮನಾಭ ನಗರ)

ಅ) ರಾಜ್ಯದಲ್ಲಿ ಇತ್ತೀಚೆಗೆ ವಿದ್ಯುತ್ ಕಡಿತ ಹೆಚ್ಚಾಗಿರುವುದಕ್ಕೆ ಸಾರ್ವಜನಿಕರಿಂದ ಸರ್ಕಾರಕ್ಕೆ ದೂರುಗಳು ಬಂದಿವೆಯೇ;

ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ವಿದ್ಯುತ್ ಕಡಿತ ಹೆಚ್ಚಾಗಿರುವುದರಿಂದ ಗ್ರಾಮಗಳಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ವಿದ್ಯುತ್ ಕಡಿತವಾಗುತ್ತಿರುವುದನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮವೇನು;

ಶ್ರೀ ಡಿ. ಕೆ. ಶಿವಕುಮಾರ (ಇಂಧನ ಸಚಿವರು)

ಅ) ಹೌದು.

ಆ) ರಾಜ್ಯದಲ್ಲಿ ಕೆಲವು ತಾಂತ್ರಿಕ ಕಾರಣಗಳಿಂದಾಗಿ ಕೆಲವೊಮ್ಮೆ ವಿದ್ಯುತ್ ಸರಬರಾಜಿನಲ್ಲಿ ಆಗುವ ವ್ಯತ್ಯಯವನ್ನು ಹೊರತುಪಡಿಸಿ ಕುಡಿಯುವ ನೀರಿನ ಸ್ಥಾವರಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.

ಇ) ರಾಜ್ಯದಲ್ಲಿನ ವಿದ್ಯುತ್ ಅಭಾವವನ್ನು ಸರಿದೂಗಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.

ಖಾಸಗಿ ಹಾಗೂ ಹೊರರಾಜ್ಯಗಳಿಂದ ಅಲ್ಪಾವಧಿ ಆಧಾರದಲ್ಲಿ 948–968 ಮೆಗಾವ್ಯಾಟ್ ವಿದ್ಯುತ್ ಖರೀದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ.

ಅಲ್ಪಾವಧಿ ಹಾಗೂ ಮಧ್ಯಮಾವಧಿ ಆಧಾರದಲ್ಲಿ ಪ್ರತ್ಯೇಕವಾಗಿ 1000 ಮೆಗಾವ್ಯಾಟ್ ವಿದ್ಯುತ್ ಖರೀದಿಗೆ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ.

ದಿನಾಂಕ: 16.09.2015ರಿಂದ ಅನ್ವಯವಾಗುವಂತೆ ಸೆಕ್ಷನ್–11ನನ್ನು ಜಾರಿಗೊಳಿಸಿ, ಹೊರ ರಾಜ್ಯಗಳಿಗೆ ರಾಜ್ಯದಿಂದ ಪೂರೈಕೆಯಾಗುತ್ತಿದ್ದ

ವಿದ್ಯುತ್ತನ್ನು ಸ್ಥಗಿತಗೊಳಿಸಲಾಗಿದೆ. ಇದರಿಂದ ದೈನಂದಿನ ವಿದ್ಯುತ್ ಲಭ್ಯತೆಯಲ್ಲಿ ಸುಮಾರು 300 ಮೆಗಾವ್ಯಾಟ್ ಹೆಚ್ಚಳಗೊಂಡಿರುತ್ತದೆ.

ಕೈಗಾರಿಕೆಗಳಿಗೆ ಬದಲಿ ರಜಾ ದಿನವನ್ನು ಅಳವಡಿಸಿಕೊಳ್ಳುವಂತೆ ವಿನಂತಿಸಲಾಗಿದೆ.

ಕೇಂದ್ರೀಯ ವಿದ್ಯುತ್ ಜಾಲದಿಂದ ನವೆಂಬರ್–2015 ರಿಂದ ಹೆಚ್ಚುವರಿಯಾಗಿ 200 ಮೆಗಾವ್ಯಾಟ್ ವಿದ್ಯುತ್‌ನ್ನು ಪಡೆಯಲಾಗುತ್ತಿದೆ.

ಬಿಡುಗಡೆಯಾದ ಅನುದಾನ

5300 (5438); ಶ್ರೀ ಬಾಲಕೃಷ್ಣ ಸಿ. ಎನ್. (ಶ್ರವಣಬೆಳಗೊಳ)

ಅ) ಕಳೆದ ಮೂರು ವರ್ಷಗಳಲ್ಲಿ ವಕ್ಫ್ ಮಂಡಳಿಯಿಂದ ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ನಿಗಧಿಪಡಿಸಿ ಬಿಡುಗಡೆ ಮಾಡಿರುವ ಮೊತ್ತವೆಷ್ಟು; (ಕ್ಷೇತ್ರವಾರು ವರ್ಷವಾರು ವಿವರಗಳನ್ನು ನೀಡುವುದು)

ಆ) ಈ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. (ವಿವರ ನೀಡುವುದು).

ಇ) ಪ್ರಸ್ತುತ ನೀಡುತ್ತಿರುವ ಅನುದಾನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಹೆಚ್ಚಿಸಲಾಗುವುದು. ಯಾವಾಗಿನಿಂದ ಜಾರಿಗೆ ತರಲಾಗುವುದು.